ಭಾರತ ಮತ ಮಹಾ ಸಮರ

ಸಮಾಚಾರ ಸಣ್ಣದಲ್ಲ

ರಾಜ್ಯದಲ್ಲಿರುವುದು ನಪುಂಸಕ ಸರಕಾರ

ತುಮಕೂರು: ರಾಜ್ಯದಲ್ಲಿರುವುದು ನಪುಂಸಕ ಸರಕಾರ ಎಂಸು ಜೆಡಿಎಸ್ ಶಾಸಕ ಎಂ.ಟಿ.ಕೃಷ್ಣಪ್ಪ ರಾಜ್ಯ ಕಾಂಗ್ರೆಸ್ ಸರಕಾರದ ವಿರುದ್ಧ ಹರಿಹಾಯ್ದಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿ, ಕದ್ದು ಮುಚ್ಚಿ ತಮಿಳು ನಾಡಿಗೆ ನೀರು ಹರಿಸಲು ಆಗುವ ಸರಕಾರಕ್ಕೆ ನಮಗೆ ಕುಡಿಯಲು ನೀರು ಕೊಡಲು ಸಾಧ್ಯವಾಗುತ್ತಿಲ್ಲ ಗಂಡಸುತನ ಇಲ್ಲದ ಸರಕಾರವಾಗಿದ್ದು ನಿಜವಾದ ನಪುಂಸಕರು ಕಾಂಗ್ರೆಸ್ಸಿಗರು ಎಂದರು. ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ತಮ್ಮ ಟವಲ್‌ಅನ್ನು ಗದೆ ಮಾಡಿಕೊಂಡಿದ್ದಾರೆ. ಗದೆಯಂತೆ ಟವೆಲ್‌ನ್ನು ಎತ್ತಿ ಎತ್ತಿ ಹೆಗಲ ಮೇಲೆ ಇಡುತ್ತಾರೆ ಎಂದು ಸಿದ್ದರಾಮಯ್ಯರಂತೆ ಅನುಕರಣೆ ಮಾಡಿದ ಶಾಸಕರು ಬರ ಪರಿಹಾರ ಕೇಳಲು ಕೇಂದ್ರಕ್ಕೆ ಹೋದಾಗ ಸಿದ್ದರಾಮಯ್ಯ ಗದೆ ಹಿಡಿದುಕೊಂಡು ಹೋಗುತ್ತಾರೆ. ಇವರ ಗದೆಗೆ ಯಾರೂ ಹೆದರೋದಿಲ್ಲ ಎಂದು ಕಿಡಿಕಾರಿದರು. ತಮಿಳುನಾಡಿನಲ್ಲಿ ವಿರೋಧ ಪಕ್ಷ ಅಧಿಕಾರದಲ್ಲಿ ಇದೆ. ಅಲ್ಲಿಯ ಸರಕಾರ ಕೇಂದ್ರದಿಂದ ಅನುದಾನ, ಪರಿಹಾರ ಪಡೆಯುವಲ್ಲಿ ಯಶಸ್ವಿಯಾಗಿದೆ. ಆದರೆ ಸಿದ್ದರಾಮಯ್ಯ ಸರಕಾರದಿಂದ ಅದು ಯಾಕೆ ಸಾಧ್ಯವಾಗುತ್ತಿಲ್ಲ. ಸುಖಾ ಸುಮ್ಮನೆ ಕೇಂದ್ರದ ಮೇಲೆ ಗೂಬೆ ಕೂರಿಸುವ ಕೆಲಸ ಮಾಡುತ್ತಿದ್ದಾರೆ ಎಂದು ದೂರಿದರು.

ಇರುವುದಾದರೆ ಇರಿ, ಇಲ್ಲ ಹೊರಡಿ

ಯಲ್ಲಾಪುರ: ಬೇಕಾದಾಗ ಬರುವುದು, ಬೇಡ ಅನಿಸಿದಾಗ ಬಿಟ್ಟುಕೊಂಡು ಹೋಗುವವರನ್ನು ನೋಡಿದರೆ ತುಂಬಾ ಬೇಸರವಾಗುತ್ತದೆ. ಸರಿಯಾಗಿ ಇರುವವರು ಇರಲಿ. ಇಲ್ಲಾ ಅಂದರೆ ಹೊರಡಲಿ ಎನ್ನುವ ಮೂಲಕ ಬಿಜೆಪಿ ರಾಜ್ಯ ಘಟಕದ ಉಪಾಧ್ಯಕ್ಷೆ ರೂಪಾಲಿ ನಾಯ್ಕ ಪರೋಕ್ಷವಾಗಿ ಯಲ್ಲಾ ಪುರ ಶಾಸಕ ಶಿವರಾಮ ಹೆಬ್ಬಾರ್ ಅವರಿಗೆ ಕುಟುಕಿ ದ್ದಾರೆ. ಪಟ್ಟಣದ ಎಪಿಎಂಸಿ ರೈತ ಸಭಾಭವನದಲ್ಲಿ ಬುಧವಾರ ಉತ್ತರ ಕನ್ನಡ ಲೋಕಸಭಾ ಕ್ಷೇತ್ರದ ಚುನಾವಣಾ ಪೂರ್ವಸಿದ್ಧತಾ ಸಭೆಯಲ್ಲಿ ಮಾತನಾಡಿ, ಪಕ್ಷ ಅವರಿಗೆ ಏನೆಲ್ಲ ಕೊಟ್ಟಿದೆ. ಬೇಸರವಿದ್ದರೆ ಪಕ್ಷದ ವೇದಿಕೆಯಲ್ಲಿ ಮಾತಾಡಲಿ. ಬಿಜೆಪಿಯ ಒಬ್ಬ ಶಾಸಕರು ಇಲ್ಲಿ ಇಲ್ಲ, ಕಾಂಗ್ರೆಸ್‌ಗೆ ಹೋಗುತ್ತಾರೆ. ಎನ್ನಲಾಗು ತ್ತಿದೆ. ಅವರ ಹೆಸರು ಹೇಳುವುದನ್ನು ಬಿಟ್ಟುಬಿಡಿ ಎಂದರು.

ಪ್ರಚೋದನಕಾರಿ ಹೇಳಿಕೆ: ಕ್ಷಮೆಗೆ ಆಗ್ರಹ

ಹುಬ್ಬಳ್ಳಿ: ಪ್ರಧಾನಿ ನರೇಂದ್ರ ಮೋದಿ ಅವರು ಜಾಗತಿಕ ಮಟ್ಟದ ನಾಯಕರಾಗಿ ಗುಡ ತಿಸಿಕೊಂಡಿದ್ದಾರೆ. ಅವರ ಬಗ್ಗೆ ಪ್ರಚೋದನಕಾರಿಯಾಗಿ ಹೇಳಿಕೆ ನೀಡಿರುವ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ಶಿವರಾಜ ತಂಗಡಗಿ ಅವರು ಕ್ಷಮೆ ಕೇಳಬೇಕು ಎಂದು ಶಾಸಕ ಮಹೇಶ ಟೆಂಗಿನಕಾಯಿ ಆಗ್ರಹಿಸಿದರು. ಸುದ್ದಿಗಾರರೊಂದಿಗೆ ಮಾತನಾಡಿ, ರಾಜಕಾರಣದಲ್ಲಿ ಆರೋಪ, ಪ್ರತ್ಯಾರೋಪ ಸಹಜ. ಆದರೆ, ಮಾತನಾಡುವಾಗ ಎಚ್ಚರವಹಿಸಬೇಕು. ಬೇರೆಯವರ ಗೌರವಕ್ಕೆ ಧಕ್ಕೆಯಾಗದ ರೀತಿಯಲ್ಲಿ ವರ್ತಿಸಬೇಕು. ಮಾತಿನ ವೇಗದಲ್ಲಿ ಮೋದಿ ಮೋದಿ ಎನ್ನುವವರಿಗೆ ಕಪಾಳಕ್ಕೆ ಹೊಡಿಯಿರಿ ಎಂದು ತಪ್ಪಾಗಿ ಮಾತನಾಡಿರುವ ತಂಗಡಗಿಯವರು ಕೂಡಲೇ ಕ್ಷಮೆ ಕೇಳಿ, ಮುಂದಿನ ದಿನಗಳಲ್ಲಿ ಉತ್ತಮ ನಡಾವಳಿಕೆಯೊಂದಿಗೆ ರಾಜಕಾರಣ ಮಾಡಬೇಕು ಎಂದು ತಿಳಿಸಿದರು. ಕೋಲಾರ ಮೀಸಲು ಲೋಕಸಭಾ ಕ್ಷೇತ್ರದ ಟಿಕೆಟ್ ಹಂಚಿಕೆ ವಿಚಾರ ಕಾಂಗ್ರೆಸ್‌ನ ಆಂತರಿಕ ವಿಷಯ. ಕಾಂಗ್ರೆಸ್- ಬಿಜೆಪಿಯಲ್ಲಿ ಅಭ್ಯರ್ಥಿಗಳಿಗೆ ಟಿಕೆಟ್ ಹಂಚಿಕೆಯಲ್ಲಿ ಭಿನ್ನಾಭಿಪ್ರಾಯ, ಅಸಮಾಧಾನ ಉಂಟಾಗುವುದು ಸಹಜ. ಕ್ರಮೇಣ ಎಲ್ಲವೂ ಸರಿಯಾಗಲಿದೆ ಎಂದರು. ಕಾಂಗ್ರೆಸ್‌ನಲ್ಲಿಯೇ ಎರಡು ಬಣಗಳು ಸೃಷ್ಟಿಯಾಗಿವೆ. ಲೋಕಸಭಾ ಚುನಾವಣೆಯ ನಂತರ ಸಿದ್ದರಾಮಯ್ಯ ನೇತೃತ್ವದ ರಾಜ್ಯ ಸರಕಾರವು ಬಹುದೊಡ್ಡ ಆಘಾತ ಎದುರಿಸಲಿದೆ. ರಾಜ್ಯದ 28 ಲೋಕಸಭಾ ಕ್ಷೇತ್ರಗಳಲ್ಲೂ ನಮ್ಮ ಪಕ್ಷದ ಅಭ್ಯರ್ಥಿಗಳು ಗೆಲ್ಲುತ್ತಾರೆ ಎಂದು ವಿಶ್ವಾಸವನ್ನು ವ್ಯಕ್ತಪಡಿಸಿದರು.

ಗಡ್ಡದೇವರಮಠ ಗೆಲುವು ನಿಶ್ಚಿತ

ಮುಳಗುಂದ: ರಾಜ್ಯದಲ್ಲಿ ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ದಿಂದ 1.10 ಕೋಟಿ ಕುಟುಂಬಗಳನ್ನು ಬಡತನ ದಿಂದ ಮೇಲೆ ತರಲಾಗಿದೆ. ಸಿ.ಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರಕಾರದ ಮೇಲೆ ಜನರು ವಿಶ್ವಾಸ ಇಟ್ಟಿದ್ದಾರೆ. ಈ ಬಾರಿ ಹಾವೇರಿ ಲೋಕಸಭಾ ಕಾಂಗ್ರೆಸ್ ಪಕ್ಷದ ಅಭ್ಯರ್ಥಿ ಆನಂದಸ್ವಾಮಿ ಗಡ್ಡದೇವರಮಠ ಗೆಲುವು ನಿಶ್ಚಿತ ಎಂದು ಸಚಿವ ಎಚ್.ಕೆ.ಪಾಟೀಲ ವಿಶ್ವಾಸ ವ್ಯಕ್ತಪಡಿಸಿ ದರು. ಗದಗ ತಾಲ್ಲೂಕಿನ ನಾಗಾವಿ ಗ್ರಾಮದಲ್ಲಿ ಬುಧವಾರ ನಡೆದ ಕಾಂಗ್ರೆಸ್ ಪಕ್ಷದ ಕಾರ್ಯಕರ್ತರ ಸಭೆಯಲ್ಲಿ ಅವರು ಮಾತನಾಡಿ, ಪ್ರಧಾನ ಮಂತ್ರಿ ನರೇಂದ್ರ ಮೋದಿ ಅವರು ದೇಶದ ರೈತರ ಆದಾಯ ದುಪ್ಪಟ್ಟು, ಪ್ರತಿಯೊಬ್ಬರ ಖಾತೆಗೆ ಹದಿನೈದು ಲಕ್ಷ ರೂಪಾಯಿ, 2 ಕೋಟಿ ಯುವಕರಿಗೆ ಉದ್ಯೋಗ ಸೃಷ್ಟಿಸುವುದಾಗಿ ಹೇಳಿದ್ದರು. ಆದರೆ ಅವರ ಯಾವುದೇ ಭರವಸೆ ಈಡೇರಿಸಿಲ್ಲ, ಯುವಕರನ್ನ ಕತ್ತಲೆಗೆ ನೋಕಿದೆ. ಬಿಜೆಪಿ ಸರಕಾರದ ಬಗ್ಗೆ ಜನರು ತಾತ್ಸಾರ ಭಾವನೆ, ಅಗೌರ, ಹೊಂದಿದ್ದಾರೆ. ಈ ಬಾರಿ ರಾಜ್ಯದಲ್ಲಿ 20ಕ್ಕೂ ಹೆಚ್ಚು ಸ್ಥಾನಗಳಲ್ಲಿ ಕಾಂಗ್ರೆಸ್ ಗೆಲ್ಲಲಿದೆ. ಆನಂದ ಸ್ವಾಮಿ ಗಡ್ಡದೇವರಮಠ ಅವರಿಗೆ ಅತ್ಯಧಿಕ ಮತಗಳ ಅಂತರದಿಂದ ಗೆಲ್ಲಿಸಬೇಕು ಎಂದು ಕಾರ್ಯಕರ್ತರಿಗೆ ಕರೆ ನೀಡಿದರು.



ಬಿಜೆಪಿಯಿಂದ ಕರಂದ್ಲಾಜೆ, ಕಾಂಗ್ರೆಸ್‌ನಿಂದ ಪ್ರೊ.ರಾಜೀವ್ ಗೌಡ ಮಧ್ಯೆ ನೇರ ಹಣಾಹಣಿ

ಕೈ, ಕಮಲದಲ್ಲಿ ಬೆಂಗಳೂರು ಉತ್ತರ ಯಾರಿಗೆ?

ಬೆಂಗಳೂರು: ಒಂದು ಕಾಲದಲ್ಲಿ ಕಾಂಗ್ರೆಸ್‌ನ ಭದ್ರ ಕೋಟೆಯಾಗಿ, ಕಳೆದ ಎರಡು ದಶಕಗಳಿಂದ ಬಿಜೆಪಿಯ ಶಕ್ತಿ ಕೇಂದ್ರವಾಗಿ ರೂಪುಗೊಂಡಿರುವ ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರ ಈ ಬಾರಿ ಬಿಜೆಪಿ ಮತ್ತು ಕಾಂಗ್ರೆಸ್ ಅಭ್ಯರ್ಥಿಗಳ ಬದಲಾವಣೆಯೊಂದಿಗೆ ಚುನಾವಣೆಗೆ ಸಜ್ಜಾಗಿದೆ.

ಬಿಜೆಪಿಯಿಂದ ಶೋಭಾ ಕರಂದ್ಲಾಜೆ ಮತ್ತು ಕಾಂಗ್ರೆಸ್‌ನಿಂದ ಪ್ರೊ.ಎಂ.ವಿ.ರಾಜೀವ್ ಗೌಡ ಕಣಕ್ಕಿಳಿದಿದ್ದು, ಬಿಜೆಪಿ-ಜೆಡಿಎಸ್ ಮೈತ್ರಿಯಾಗಿರುವುದರಿಂದ ಈ ಬಾರಿಯೂ ಜೆಡಿಎಸ್ ಅಭ್ಯರ್ಥಿಗಳಿಲ್ಲ. ಹೀಗಾಗಿ ಬಿಜೆಪಿ ಮತ್ತು ಕಾಂಗ್ರೆಸ್ ಮಧ್ಯೆ ನೇರ ಹಣಾಹಣಿ ಇದ್ದು, 2004ರಲ್ಲಿ ಬಿಜೆಪಿ ಕಿತ್ತು ಕೊಂಡಿದ್ದ ಈ ಕ್ಷೇತ್ರವನ್ನು ಎರಡು ದಶಕದ ನಂತರ ತನ್ನ ತೆಕ್ಕೆಗೆ ಸೆಳೆದುಕೊಳ್ಳಲು ಕಾಂಗ್ರೆಸ್ ಪ್ರಯತ್ನಿಸುತ್ತಿದೆ. 1952 ಹಾಗೂ 1957ರಲ್ಲಿ ಕೇಶವ ಅಯ್ಯಂಗಾರ್, 1962, 1967, 1971ರಲ್ಲಿ ಸತತ ಮೂರು ಬಾರಿ ಕೆಂಗಲ್ ಹನುಮಂತಯ್ಯ ಈ ಕ್ಷೇತ್ರ ದಿಂದ ಗೆಲುವು ಸಾಧಿಸಿದ್ದರೆ, ನಂತರ 1977, 1980, 1984, 1989, 1991ರಲ್ಲಿ ಸತತ ಐದು ಬಾರಿ ಕಾಂಗ್ರೆಸ್‌ನ ಸಿ.ಕೆ. ಜಾಫರ್ ಶರೀಫ್ ಈ ಕ್ಷೇತ್ರದಲ್ಲಿ ಸೋಲಿಲ್ಲದ ಸರದಾರರಾಗಿದದರು. 1996ರಲ್ಲಿ ಜಾಫರ್ ಶರೀಫ್ ಬದಲು ಮಹಮ್ಮದ್ ಉಬೇ ದುಲ್ಲಾ ಶರೀಫ್ ಅವರಿಗೆ ಕಾಂಗ್ರೆಸ್ ಟಿಕೆಟ್ ನೀಡಿತ್ತು. ಆದರೆ, ಆಗ ಜನತಾ ದಳದ ಅಭ್ಯರ್ಥಿ ಸಿ.ನಾರಾಯಣಸ್ವಾಮಿ ಗೆದ್ದಿದ್ದರು. 1998, 1999ರಲ್ಲಿ ಮತ್ತೆ ಕಾಂಗ್ರೆಸ್ ಸಿ.ಕೆ.ಜಾಫರ್ ಶರೀಫ್‌ಗೆ ಮಣೆ ಹಾಕಿ ಮತ್ತೆ ಕ್ಷೇತ್ರವನ್ನು ತನ್ನ ಕೈವಶ ಮಾಡಿಕೊಂಡಿತ್ತು.

2004ರಿಂದ ಬಿಜೆಪಿ ವಶದಲ್ಲಿ ಕ್ಷೇತ್ರ: ಆದರೆ, 2004ರಲ್ಲಿ ನಿವೃತ್ತ ಐಪಿಎಸ್ ಅಧಿಕಾರಿ ಎಚ್.ಟಿ. ಸಾಂಗ್ಲಿಯಾನ ಬಿಜೆಪಿಯಿಂದ ಕಣಕ್ಕಿಳಿದು ಈ ಕ್ಷೇತ್ರವನ್ನು ಕಾಂಗ್ರೆಸ್‌ನಿಂದ ಕಿತ್ತುಕೊಂಡರು. 2009ರಲ್ಲಿ ಬಿಜೆಪಿಯ ಡಿ.ಬಿ.ಚಂದ್ರೇಗೌಡ, 2014 ಮತ್ತು 2019ರಲ್ಲಿ ಅದೇ ಪಕ್ಷದ ಡಿ.ವಿ.ಸದಾನಂದಗೌಡ ಗೆದ್ದಿದ್ದರು.



ಮತದಾರರು

ಪುರುಷರು	16,29,089
ಮಹಿಳೆಯರು	15,44,415
ಇತರರು	594
ಒಟ್ಟು	31,74,098

ಜಾತಿವಾರು ಮತದಾರರು

ಒಕ್ಕಲಿಗ	5.92 ಲಕ್ಷ
ಎಸ್‌ಸಿ, ಎಸ್‌ಟಿ	4.60 ಲಕ್ಷ
ಮುಸ್ಲಿಂ	3.15 ಲಕ್ಷ
ಬ್ರಾಹ್ಮಣ	2.71 ಲಕ್ಷ
ಲಿಂಗಾಯತ	1.53 ಲಕ್ಷ
ಕುರುಬ	1.10 ಲಕ್ಷ

2019ರ ಫಲಿತಾಂಶ

ಡಿ.ವಿ.ಸದಾನಂದಗೌಡ (ಬಿಜೆಪಿ)
8,21,934

ಕೃಷ್ಣಬೈರೇಗೌಡ (ಕಾಂಗ್ರೆಸ್)
6,75,834

ಗೆಲುವಿನ ಅಂತರ
1,46,100

ಈ ಬಾರಿ ಬದಲಾದ ರಾಜಕೀಯ ಸನ್ನಿವೇಶದಲ್ಲಿ ಈ ಕ್ಷೇತ್ರದಿಂದ ಸತತ ಎರಡು ಬಾರಿ ಗೆದ್ದಿರುವ ಹಾಲಿ ಸಂಸದ ಡಿ.ವಿ.ಸದಾನಂದಗೌಡ ಬದಲು ಈ ಹಿಂದೆ ಉಡುಪಿ-ಚಿಕ್ಕಮಗಳೂರು ಕ್ಷೇತ್ರದಿಂದ ಗೆದ್ದು ಕೇಂದ್ರದಲ್ಲಿ ಸಚಿವೆಯಾಗಿರುವ ಶೋಭಾ ಕರಂದ್ಲಾಜೆ ಅವರಿಗೆ ಬಿಜೆಪಿ ಮಣೆ ಹಾಕಿದೆ. ಅದೇ ರೀತಿ ಕಾಂಗ್ರೆಸ್‌ನಿಂದ ವಿಧಾನಸಭೆ ಮಾಜಿ ಅಧ್ಯಕ್ಷ ಎಂ.ವಿ.ವೆಂಕಟಪ್ಪ ಪುತ್ರ ಪ್ರೊ.ಎಂ.ವಿ.ರಾಜೀವ್ ಗೌಡ ಅವರಿಗೆ ಟಿಕೆಟ್ ನೀಡಿದೆ.

ಶಾಸಕರ ಬಲಾಬಲ

ಬೆಂಗಳೂರು ಉತ್ತರ ಲೋಕಸಭಾ ಕ್ಷೇತ್ರದಲ್ಲಿ ಎಂಟು ವಿಧಾನಸಭಾ ಕ್ಷೇತ್ರಗಳು ಬರುತ್ತಿದ್ದು, ಈ ಪೈಕಿ ಐದು ಕ್ಷೇತ್ರಗಳಲ್ಲಿ ಬಿಜೆಪಿ ಹಾಗೂ ಮೂರು ಕ್ಷೇತ್ರಗಳಲ್ಲಿ ಕಾಂಗ್ರೆಸ್ ಶಾಸಕರು ಇದ್ದಾರೆ. ಒಬ್ಬ ಬಿಜೆಪಿ ಶಾಸಕ (ಯಶವಂತಪುರ) ಕಾಂಗ್ರೆಸ್ ಪರ ನಿಂತಿದ್ದಾರೆ. ಬಿಜೆಪಿಯಿಂದ ಕೆ.ಆರ್.ಪುರದಲ್ಲಿ ಭೈರತಿ ಬಸವರಾಜು, ಯಶವಂತಪುರ-ಎಸ್.ಟಿ. ಸೋಮಶೇಖರ್, ದಾಸರಹಳ್ಳಿ- ಎಸ್.ಮುನಿರಾಜು, ಮಹಾಲಕ್ಷ್ಮಿ ಲೇಔಟ್- ಕೆ.ಗೋಪಾಲಯ್ಯ, ಮಲ್ಲೇಶ್ವರ- ಡಾ.ಸಿ.ಎನ್.ಅಶ್ವತ್ಥ ನಾರಾಯಣ ಹಾಗೂ ಕಾಂಗ್ರೆಸ್‌ನಿಂದ ಬ್ಯಾಟರಾಯನಪುರದಲ್ಲಿ ಕಂದಾಯ ಸಚಿವ ಕೃಷ್ಣ ಬೈರೇಗೌಡ, ಹೆಬ್ಬಾಳ- ನಗರಾಭಿವೃದ್ಧಿ ಸಚಿವ ಬೈರತಿ ಸುರೇಶ್, ಪುಲಕೇಶಿನಗರದಿಂದ ಎ.ಸಿ.ಶ್ರೀನಿವಾಸ್ ಇದ್ದಾರೆ.

ತಮಗೆ ಟಿಕೆಟ್ ಕೈತಪ್ಪಿದ್ದರಿಂದಾಗಿ ಡಿ.ವಿ. ಸದಾನಂದಗೌಡ ಬೇಸರಗೊಂಡಿದ್ದಾರೆ. ಆದರೆ, ಅವರು ಕೂಡ ಸ್ಥಳೀಯ ಅಭ್ಯರ್ಥಿ ಅಲ್ಲದೇ ಇರುವ ಕಾರಣ ಅವರ ಅಸಮಾಧಾನ ಚುನಾವಣೆ ಮೇಲೆ ಹೆಚ್ಚು ಪರಿಣಾಮ ಬೀರುವ ಸಾಧ್ಯತೆ ಇಲ್ಲ. ಜತೆಗೆ ಶೋಭಾ ಕರಂದ್ಲಾಜೆ ಅವರು 2008ರಲ್ಲಿ ಇದೇ ಕ್ಷೇತ್ರ ವ್ಯಾಪ್ತಿಯ ಯಶವಂತಪುರ ವಿಧಾನಸಭಾ ಕ್ಷೇತ್ರದಿಂದ ಶಾಸಕರಾಗಿ, ಬಿಜೆಪಿ ಸರಕಾರದಲ್ಲಿ ಸಚಿವೆಯಾಗಿ ಕೆಲಸ ಮಾಡಿದ್ದು, ತಮ್ಮದೇ ಆದ ಮತಬ್ಯಾಂಕ್‌ಅನ್ನು ಕ್ಷೇತ್ರದಲ್ಲಿ ಹೊಂದಿದ್ದಾರೆ. ಇನ್ನು ಪ್ರೊ.ರಾಜೀವ್ ಗೌಡ ಈ ಹಿಂದೆ ಕಾಂಗ್ರೆಸ್‌ನಿಂದ ರಾಜ್ಯಸಭೆಗೆ ಆಯ್ಕೆಯಾಗಿದ್ದವರು. ಕಾಂಗ್ರೆಸ್‌ನಲ್ಲಿ ಹಲವು ಸ್ಥಾನಮಾನಗಳನ್ನು ಪಡೆದಿದ್ದಾರಾದರೂ ಲೋಕಸಭೆ ಚುನಾವಣೆ ಸ್ಪರ್ಧೆ ಅವರಿಗೆ ಹೊಸದು.

ಒಕ್ಕಲಿಗರೇ ಅತಿ ಹೆಚ್ಚಿನ ಸಂಖ್ಯೆಯಲ್ಲಿರುವ ಬೆಂಗಳೂರು ಉತ್ತರ ಕ್ಷೇತ್ರದಲ್ಲಿ ಈ ಇಬ್ಬರು ಅಭ್ಯರ್ಥಿಗಳು ಅದೇ ಸಮುದಾಯಕ್ಕೆ ಸೇರಿದವರು. ಹೀಗಾಗಿ ಸಮುದಾಯದ ಮತಗಳು ಹಂಚಿಕೆಯಾಗಲಿದೆ. ಬಳಿಕ ಪರಿಶಿಷ್ಟ ಜಾತಿ ಮತ್ತು ಪಂಗಡ ಹಾಗೂ ಮುಸ್ಲಿಮ್ ಮತದಾರರಿದ್ದರೆ ನಾಲ್ಕನೇ ಸ್ಥಾನದಲ್ಲಿ ಬ್ರಾಹ್ಮಣರಿದ್ದಾರೆ. ಮುಸ್ಲಿಂ ಮತಗಳು ಬಹುತೇಕ ಕಾಂಗ್ರೆಸ್‌ಗೆ ಬಿದ್ದರೆ, ಬ್ರಾಹ್ಮಣರ ಮತಗಳು ಹೆಚ್ಚಾಗಿ ಬಿಜೆಪಿಗೆ ಬರುತ್ತದೆ. ಈ ಲೆಕ್ಕಾಚಾರದಲ್ಲಿ ಎರಡೂ ಪಕ್ಷಗಳು ಸಮಬಲ ಸಾಧಿಸಿವೆ.

ಜೆಡಿಎಸ್ ಬೆಂಬಲ ಬಿಜೆಪಿಗೆ ಬಲ: 2019ರಲ್ಲಿ ಜೆಡಿಎಸ್ ಅಭ್ಯರ್ಥಿಯನ್ನು ಕಣಕ್ಕಿಳಿಸದಿದ್ದರೂ ರಾಜ್ಯದಲ್ಲಿ ಕಾಂಗ್ರೆಸ್-ಜೆಡಿಎಸ್ ಮೈತ್ರಿ ಸರಕಾರ ಇದ್ದುದರಿಂದ ಆ ಪಕ್ಷದ ಮತಗಳು ಕಾಂಗ್ರೆಸ್ ಅಭ್ಯರ್ಥಿ ಪಾಲಾಗಿತ್ತು. ಹೀಗಾಗಿ ಬಿಜೆಪಿಯ ಗೆಲುವಿನ ಅಂತರ ಕಡಿಮೆಯಾಗಿತ್ತು. ಆದರೆ, ಈ ಬಾರಿ ಬಿಜೆಪಿ-ಜೆಡಿಎಸ್ ಮೈತ್ರಿಯಾಗಿರುವುದರಿಂದ ಜೆಡಿಎಸ್ ಬೆಂಬಲ ಶೋಭಾ ಕರಂದ್ಲಾಜೆಗೆ ಸಿಗಲಿದೆ. ಇದು ಬಿಜೆಪಿಗೆ ಬಲ ತಂದುಕೊಡಲಿದೆ.

ಆದರೆ, ಇದೇ ಲೋಕಸಭಾ ಕ್ಷೇತ್ರ ವ್ಯಾಪ್ತಿಗೆ ಬರುವ ಯಶವಂತಪುರ ವಿಧಾನಸಭಾ ಕ್ಷೇತ್ರದಲ್ಲಿ ಬಿಜೆಪಿಯೇ ಗೆದ್ದಿದ್ದರೂ ಶಾಸಕ ಎಸ್.ಟಿ. ಸೋಮಶೇಖರ್ ಪಕ್ಷದ ವಿರುದ್ಧ ತಿರುಗಿ ಬಿದ್ದಿದ್ದಾರೆ. ರಾಜ್ಯಸಭೆ ಚುನಾವಣೆಯಲ್ಲಿ ಕಾಂಗ್ರೆಸ್ ಬೆಂಬಲಿಸಿದ್ದ ಸೋಮಶೇಖರ್, ಶೋಭಾ ಕರಂದ್ಲಾಜೆ ಬಿಜೆಪಿ ಅಭ್ಯರ್ಥಿಯಾಗುತ್ತಿದ್ದಂತೆ ಅವರ ವಿರುದ್ಧ ಕಿಡಿಕಾರಿದ್ದರು. ಹೀಗಾಗಿ ಅವರು ಕಾಂಗ್ರೆಸ್ ಪರವಾಗಿ ಕೆಲಸ ಮಾಡುವುದು ಬಹುತೇಕ ಖಚಿತ. ಆದರೆ, ಕಳೆದ ವಿಧಾನಸಭೆ ಚುನಾವಣೆಯಲ್ಲಿ ಸೋಮಶೇಖರ್‌ಗೆ ಕಠಿಣ ಸ್ಪರ್ಧೆ ನೀಡಿದ್ದ ಜೆಡಿಎಸ್‌ನ ಜವರಾಯಿ ಗೌಡ ಬಿಜೆಪಿ ಜತೆ ನಿಂತಿದ್ದಾರೆ. ಜತೆಗೆ ಶೋಭಾ ಕರಂದ್ಲಾಜೆ 2008ರಲ್ಲಿ ಇದೇ ಕ್ಷೇತ್ರದಿಂದ ಶಾಸಕರಾಗಿ ಆಯ್ಕೆಯಾಗಿದ್ದರಿಂದಾಗಿ ತಮ್ಮದೇ ಆದ ಮತಗಳನ್ನು ಅವರು ಕ್ಷೇತ್ರದಲ್ಲಿ ಹೊಂದಿದ್ದಾರೆ. ಜತೆಗೆ ಬಿಜೆಪಿಯ ಸಾಂಪ್ರದಾಯಿಕ ಮತಗಳೂ ಅವರ ಕೈಹಿಡಿಯಲಿವೆ.

ಆದರೆ, ಕ್ಷೇತ್ರದಲ್ಲಿ ನಾಲ್ಕು ಲಕ್ಷಕ್ಕೂ ಹೆಚ್ಚಿರುವ ಪರಿಶಿಷ್ಟ ಜಾತಿ ಮತ್ತು ಪಂಗಡ ಹಾಗೂ 3 ಲಕ್ಷಕ್ಕೂ ಹೆಚ್ಚಿರುವ ಮುಸ್ಲಿಂ ಮತಗಳು ಕಾಂಗ್ರೆಸ್‌ಗೆ ಶ್ರೀರಕ್ಷೆಯಾಗಲಿದೆ. ರಾಜೀವ್ ಗೌಡ ಹೊಸ ಅಭ್ಯರ್ಥಿಯಾದರೂ ಕಳೆದ ವಿಧಾನಸಭೆ ಚುನಾವಣೆ ಬಳಿಕ ಕಾಂಗ್ರೆಸ್ ಪರ ಹೆಚ್ಚಿದ ಒಲವು, ಬಿಜೆಪಿಯಲ್ಲಿ ಹಾಲಿ ಸಂಸದ ಡಿ.ವಿ.ಸದಾನಂದಗೌಡ ಅವರ ಅಸಮಾಧಾನ ಪಕ್ಷದ ಅಭ್ಯರ್ಥಿಗೆ ಸ್ವಲ್ಪ ಮಟ್ಟಿಗೆ ಸಹಾಯ ಮಾಡಬಹುದು.

ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ.ವಿಜಯೇಂದ್ರ ವಿಶ್ವಾಸ

ಬಿಜೆಪಿ ಬಂಡಾಯ ಶೀಘ್ರವೇ ಶಮನ

ಮೈಸೂರು: ರಾಜ್ಯ ಬಿಜೆಪಿಯಲ್ಲಿನ ಸಮಸ್ಯೆಗಳು ಇನ್ನು ನಾಲ್ಕೈದು ದಿನಗಳಲ್ಲಿ ಬಗೆಹರಿಯಲಿದ್ದು, ಕರ್ನಾಟಕದ 28 ಕ್ಷೇತ್ರಗಳನ್ನೂ ಬಿಜೆಪಿ -ಜೆಡಿಎಸ್ ಮೈತ್ರಿ ಕೂಟ ಗೆಲ್ಲಲಿದೆ ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ವಿಶ್ವಾಸ ವ್ಯಕ್ತಪಡಿಸಿದರು.

ಸುದ್ದಿಗಾರರೊಂದಿಗೆ ಅವರು ಮಾತನಾಡಿ, ರಾಜ್ಯದಲ್ಲಿ ಕಾಂಗ್ರೆಸ್ ಅಧಿಕಾರದಲ್ಲಿ ಇದ್ದರೂ ಕೇಂದ್ರದಲ್ಲಿ ಮತ್ತೊಮ್ಮೆ ಬಿಜೆಪಿಯೇ ಅಧಿಕಾರಕ್ಕೆ ಬರಲಿದೆ. ಹೀಗಾಗಿ ಪಕ್ಷದ ಟಿಕೆಟ್‌ಗೆ ಎಲ್ಲೆಡೆ ಪೈಪೋಟಿ ಹೆಚ್ಚಿದ್ದು, ಒಂದಷ್ಟು ಗೊಂದಲ ಆಗಿತ್ತು. ಎಲ್ಲವನ್ನೂ ಸರಿಪಡಿಸುವ ಪ್ರಯತ್ನ ಮಾಡುತ್ತಿದ್ದೇವೆ. ಬೆಳಗಾವಿ ಹಾಗೂ ದಾವಣಗೆರೆಗೆ ಬಿ.ಎಸ್. ಯಡಿಯೂರಪ್ಪ ಭೇಟಿ ಕೊಟ್ಟಿದ್ದು, ಅಲ್ಲಿನ ಸಮಸ್ಯೆ ಬಗೆಹರಿಸಿದ್ದಾರೆ. ಈಶ್ವರಪ್ಪ ಅವರ ಸಮಸ್ಯೆ ಸಹ ಬಗೆಹರಿಯಲಿದೆ ಎಂದರು. ಬಿಜೆಪಿ ಹೈಕಮಾಂಡ್ ಬಲಿಷ್ಠವಾಗಿದ್ದು, ಕೇವಲ ಯಡಿಯೂರಪ್ಪ, ವಿಜಯೇಂದ್ರ ಹೇಳಿದ್ದನ್ನು ಕೇಳಿ ತೀರ್ಮಾನಿಸುವಂತಹ ನಾಯಕತ್ವ ನಮ್ಮದಲ್ಲ. ಮೋದಿ, ನಡ್ಡಾ, ಅಮಿತ್ ಶಾ ಸಮ್ಮುಖದಲ್ಲಿ ಎಲ್ಲ ತೀರ್ಮಾನ ಆಗುತ್ತಿದೆ. ಪಕ್ಷದ ಹಿತದೃಷ್ಟಿಯಿಂದ ನಾವೆಲ್ಲ ಒಂದಾಗಿಯೇ ಚುನಾವಣೆ ಎದುರಿಸಲಿದ್ದೇವೆ ಎಂದರು.

ಪ್ರತಾಪಸಿಂಹಗೆ ಭವಿಷ್ಯವಿದೆ

ಮಡಿಕೇರಿ: ಸಂಸದ ಪ್ರತಾಪಸಿಂಹ ಅವರಿಗೆ ರಾಜ್ಯ ರಾಜಕಾರಣದಲ್ಲಿ ಉಜ್ವಲ ಭವಿಷ್ಯ ಇದೆ ಎಂದು ಬಿಜೆಪಿ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಹೇಳಿದ್ದಾರೆ. ಕ್ರಿಸ್ಟಲ್ ಕೋರ್ಟ್ ಸಭಾಂಗಣದಲ್ಲಿ ಬುಧವಾರ ನಡೆದ ಬಿಜೆಪಿ ಕಾರ್ಯಕರ್ತರ ಸಮಾವೇಶದಲ್ಲಿ ಅವರು ಮಾತನಾಡಿ, ಪ್ರತಾಪಸಿಂಹ ಅವರಿಗೆ ಟಿಕೆಟ್ ತಪ್ಪಿದೆ ಎಂದು ಭಾವಿಸಬಾರದು. ಅವರು ಮುಂದೆ ರಾಜ್ಯ ರಾಜಕಾರಣದಲ್ಲಿ ಮಹತ್ವದ ಭೂಮಿಕೆ ನಿಭಾಯಿಸಲಿದ್ದಾರೆ.

ಕಾಂಗ್ರೆಸ್‌ನಲ್ಲಿ ಡಿಕೆಶಿ, ಇತರರ ಮಧ್ಯೆ ಜಗಳ

ಧಾರವಾಡ : ಡಿಕೆಶಿ ಮತ್ತು ಇತರರ ನಡುವೆ ಜಗಳವಿದೆ. ಕಾಂಗ್ರೆಸ್ ಪಕ್ಷದಲ್ಲಿ ಎಲ್ಲವೂ ಸರಿಯಿಲ್ಲ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೇಳಿದರು.

ಕೋಲಾರದ ಐವರು ಕೈ ಶಾಸಕರ ರಾಜೀನಾಮೆ ವಿಚಾರಕ್ಕೆ ಸಂಬಂಧಿಸಿದಂತೆ ಸುದ್ದಿಗಾರರೊಂದಿಗೆ ಮಾತನಾಡಿ, ಡಿಕೆಶಿ ಮತ್ತು ಇತರರ ನಡುವೆ ಜಗಳವಿದೆ. ಸರಕಾರ ಸರಿಯಾಗಿ ನಡೆಸಲು ಆಗುತ್ತಿಲ್ಲ. ಅನಗತ್ಯವಾಗಿ ಬಿಜೆಪಿ ಮತ್ತು ಕೇಂದ್ರ ಸರಕಾರದ ಮೇಲೆ ಆರೋಪ ಹೊರಿಸುತ್ತಿದ್ದಾರೆ. ಶೇ.75ರಷ್ಟು ಎಸ್‌ಡಿಆರ್‌ಎಫ್ ಹಣ ಭಾರತ ಸರಕಾರ ಕೊಡುತ್ತದೆ. ಆ ಹಣ ಹಂಚಿ ಬಿಡುಗಡೆ ಮಾಡಿಲ್ಲ, ಅದು ಬಿಟ್ಟು ಕೋರ್ಟ್‌ಗೆ ಹೋಗಿದ್ದಾರೆ ಎಂದು ಹರಿಹಾಯ್ದರು.

ಡಿಕೆಶಿ ದೇವಸ್ಥಾನ ಭೇಟಿ ವಿಚಾರಕ್ಕೆ ಪ್ರತಿಕ್ರಿಯಿಸಿದ ಅವರು, ಅವರಿಗೆ ದೇವಸ್ಥಾನಗಳ ಮೇಲೆ ನಂಬಿಕೆ ಬಂದಿರೋದು ಒಳ್ಳೆಯದು. ಚುನಾವಣೆಯ ಸಂದರ್ಭದಲ್ಲಿ ಹಿಂದೂವನ್ನು ನಿರ್ಲಕ್ಷ್ಯ ಮಾಡಬಾರದು ಅನಿಸಿದೆ. ಹೀಗೆ ಕಾಂಗ್ರೆಸ್‌ಗೆ ಅನಿಸಿದ್ದೆ ಬಿಜೆಪಿಯ ಮೊದಲ ಜಯವಾಗಿದೆ ಎಂದು ತಿಳಿಸಿದರು. ಕಾಂಗ್ರೆಸ್ ಇಷ್ಟು ವರ್ಷ ಸರಕಾರದಲ್ಲಿತ್ತು. ಆಗ ಎಲ್ಲ ಕ್ಯಾಶ್‌ನಲ್ಲಿಯೇ ನಡೆಯುತ್ತಿತ್ತು. ಆಗ ಪ್ರಾಮಾಣಿಕವಾಗಿ ಚುನಾವಣೆ ನಡೆಸುತ್ತಿದ್ದೀರಾ? ನಾವು ಕಪ್ಪು ಹಣ ವನ್ನಾದರೂ ಚುನಾವಣೆಯಿಂದ ದೂರ ಇಟ್ಟಿದ್ದೇವೆ. ಬಾಂಡ್ ಕೊಡಲು ಚೆಕ್ ಮೂಲಕ ಹಣ ಕೊಡಬೇಕಾಗುತ್ತದೆ. ಇದು ನಮ್ಮ ಮೊದಲ ಹೆಜ್ಜೆಯಾಗಿತ್ತು. ಸುಪ್ರೀಂ ಹೇಳಿದ್ದನ್ನು ಮಾನ್ಯ ಮಾಡು ತ್ತೇವೆ ಎಂದರು.

ಯುಪಿಎ ಸರಕಾರಕ್ಕಿಂತ ಹೆಚ್ಚು ಅನುದಾನ ಕೊಡುತ್ತಿದ್ದೇವೆ. ಎಲ್ಲ ಇದ್ದರೂ ಸುಳ್ಳು ಸುದ್ದಿ ಜನರಿಗೆ ಹೇಳುತ್ತಿದ್ದಾರೆ. ಸರಕಾರ ಇದ್ದರೆಷ್ಟು ಬಿಟ್ಟರೆಷ್ಟು ಅನಿಸುತ್ತಿದೆ. ಇದು ಜನರಿಗೆ ಮಾತ್ರವಲ್ಲ, ಪಕ್ಷದ ಶಾಸಕರಿಗೂ ಅನಿಸಿದೆ. ಯಂಗ್ ಇಂಡಿಯಾ ಕೇಸ್‌ನಲ್ಲಿ ರಾಹುಲ್, ಸೋನಿಯಾ ಗಾಂಧಿ ಬೇಲ್ ಮೇಲೆ ಇದಾರಲ್ಲ? ಇದನ್ನು ಅವರು ನೆನಪಿಟ್ಟುಕೊಳ್ಳಬೇಕು.

- ಪ್ರಲ್ಹಾದ್ ಜೋಶಿ , ಕೇಂದ್ರ ಸಚಿವ

ಸಿಎಂ ವರದಾನದ ಗುಂಗಿನಲ್ಲೇ ಇರಲಿ

ಮೈಸೂರು: ಚಾಮುಂಡೇಶ್ವರಿ ಸನ್ನಿಧಿಯಿಂದಲೇ ರಾಜಕೀಯ ದಿಕ್ಸೂಚಿ ಇತರೆ ಕ್ಷೇತ್ರಗಳಿಗೆ ರವಾನೆಯಾಗಿದೆ ಎಂದು ಮಾಜಿ ಸಿಎಂ ಎಚ್.ಡಿ.ಕುಮಾರಸ್ವಾಮಿ ಸೂಚ್ಯವಾಗಿ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿ, ಬಿಜೆಪಿ ಹಾಗೂ ಜೆಡಿಎಸ್ ನಡುವೆ ಯಾವುದೇ ರೀತಿಯ ವಿಶ್ವಾಸ ಕೊರತೆ ಇಲ್ಲದೆ ಒಟ್ಟಾಗಿ ಕೆಲಸ ನಿರ್ವಹಣೆ ಮಾಡುವ ದಿಕ್ಸೂಚಿ ಇಲ್ಲಿಂದಲೇ ಎಲ್ಲ ಕ್ಷೇತ್ರಗಳಿಗೂ ಹೋಗುತ್ತಿದೆ. ಪ್ರಥಮ ಸಭೆ ಮೊದಲಿಂದಲೂ ತಾಯಿ ಚಾಮುಂಡೇಶ್ವರಿ ಸನ್ನಿಧಾನದಲ್ಲಿ ಮಾಡಿ ಕೊಂಡು ಹೋಗುತ್ತಿದ್ದೇವೆ ಎಂದರು.

ಲೋಕಸಭಾ ಚುನಾವಣೆಯ ಪ್ರಕ್ರಿಯೆಗಳು ಪ್ರಾರಂಭ ಆಗಿವೆ. ಬಿಜೆಪಿ-ಜೆಡಿಎಸ್ ಮೈತ್ರಿಯಿಂದಲೇ ಪ್ರಕ್ರಿಯೆಗಳು ಶುರುವಾಗಿವೆ. ತಾಯಿ ಚಾಮುಂಡೇಶ್ವರಿ ಸನ್ನಿಧಾನದಲ್ಲಿ ಮೈತ್ರಿ ಸಮನ್ವಯ ಸಭೆ ಮಾಡಬೇಕು ಎಂಬ ಸಂಕಲ್ಪದಂತೆ ನಡೆಯಲಾಗಿದೆ. ಮಾತ್ರವಲ್ಲ, ಈ ಮೂಲಕ 28ಕ್ಕೆ 28 ಕ್ಷೇತ್ರ ಗೆಲ್ಲುವ ಗುರಿ ಇಟ್ಟಿದ್ದೇವೆ.

ಪ್ರಥಮ ಸಭೆಯನ್ನು ತಾಯಿಯ ಆಶೀರ್ವಾದ ದಿಂದ ಇಲ್ಲಿಂದಲೇ ಪ್ರಾರಂಭ ಮಾಡಿದ್ದೇವೆ ಎಂದು ಹೇಳಿದರು.

ಮೈತ್ರಿಯೇ ನಮಗೆ ವರದಾನ ಎಂಬ ಸಿಎಂ ಸಿದ್ದರಾಮಯ್ಯ ಹೇಳಿಕೆಗೆ ಪ್ರತಿಕ್ರಿಯೆ ನೀಡಿದ ಕುಮಾರಸ್ವಾಮಿ, ಸಿದ್ದರಾಮಯ್ಯ ವರದಾನದ ಗುಂಗಲ್ಲೇ ಇರಲಿ. ಚುನಾವಣಾ ಫಲಿತಾಂಶ ಬರಲಿ, ಅವರಿಗೆ ಏನೆಂದು ಗೊತ್ತಾಗುತ್ತದೆ ಎಂದು ಮಾರ್ಮಿಕವಾಗಿ ನುಡಿದರು.

ಮಂಡ್ಯದಲ್ಲಿ ನನ್ನ ಗೆಲುವಿನ ಬಗ್ಗೆ ಜನರು ತೀರ್ಮಾನ ಮಾಡುತ್ತಾರೆ. ನಾನೊಬ್ಬ ಕನ್ನಡಿಗ, ರಾಜಕೀಯವಾಗಿ ಶಕ್ತಿ ತುಂಬೋದು ಮಂಡ್ಯ. ಮಂಡ್ಯ ಜನರು ನನಗೆ ಒತ್ತಡ ಹಾಕಿದ್ದಾರೆ. ಮಂಡ್ಯದಲ್ಲಿ ನಾನು ಗೆಲ್ತೀನಿ ಇಲ್ವೋ ಎಂದು ಜನರು ತೀರ್ಮಾನ ಮಾಡುತ್ತಾರೆ. ಕೆಆರ್‌ಎಸ್‌ನಲ್ಲಿ ನೀರು ಇಟ್ಟುಕೊಂಡು ಅಲ್ಲಿನ ಜಾನುವಾರುಗಳಿಗೆ ನೀರಿಲ್ಲ ತಮಿಳುನಾಡಿಗೆ ನೀರು ಹರಿಸಿದ್ದೀರಿ.

- ಎಚ್.ಡಿ.ಕುಮಾರಸ್ವಾಮಿ, ಮಾಜಿ ಸಿಎಂ

ಕ್ಷೇತ್ರದಲ್ಲಿ ಜನರಿಂದ ಉತ್ತಮ ಸ್ಪಂದನೆ

ರಾಮನಗರ: ನಾನು ನಿರಂತರವಾಗಿ ಜನರ ಮಧ್ಯೆ ಇದ್ದು ಕೆಲಸ ಮಾಡಿದ್ದು, ಈಗ ನನಗೆ ಕೂಲಿ ಕೊಡಿ ಎಂದು ಕೇಳುತ್ತಿದ್ದೇನೆ. ಜನರಿಂದ ನನಗೆ ಉತ್ತಮ ಸ್ಪಂದನೆ ಸಿಗುತ್ತಿದೆ ಎಂದು ಸಂಸದ ಡಿ.ಕೆ. ಸುರೇಶ್ ತಿಳಿಸಿದರು.

ಸುದ್ದಿಗಾರರೊಂದಿಗೆ ಮಾತನಾಡಿ, ಎಂಟೂ ವಿಧಾನಸಭಾ ಕ್ಷೇತ್ರಗಳಲ್ಲಿ ಕಾರ್ಯಕರ್ತರು, ಸಾರ್ವಜನಿಕರು ಬಹಳ ಉತ್ಸಾಹದಿಂದ ನನಗೆ ಬೆಂಬಲ ನೀಡುತ್ತಿದ್ದಾರೆ.

ಇದೇ ಕಾರಣಕ್ಕೆ ಬಿಜೆಪಿ ಹಾಗೂ ಜೆಡಿಎಸ್ ಹಲವು ಕಾರ್ಯಕರ್ತರು ಆ ಪಕ್ಷಗಳನ್ನು ತೊರೆದು ನಮ್ಮ ಪಕ್ಷ ಸೇರುತ್ತಿದ್ದಾರೆ. ಇದರಿಂದಾಗಿ ನಮಗೆ ಮತ್ತಷ್ಟು ಶಕ್ತಿ ಹೆಚ್ಚಾಗಿದೆ ಎಂದರು.

ಇಂದು ಬೆಳಗ್ಗೆ 11 ಗಂಟೆಗೆ ರಾಮನಗರದಲ್ಲಿ ನಾಮಪತ್ರ ಸಲ್ಲಿಕೆ ಮಾಡುತ್ತಿದ್ದು, ಈ ಸಂದರ್ಭದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಜಿಲ್ಲಾ ಉಸ್ತುವಾರಿ ಸಚಿವ ರಾಮಲಿಂಗಾ ರೆಡ್ಡಿ, ಗೃಹ ಸಚಿವ ಪರಮೇಶ್ವರ್ ಅವರು ಕೂಡ ಆಗಮಿಸಲಿದ್ದಾರೆ.

ಅದೇ ರೀತಿ ಸಾರ್ವಜನಿಕರಿಗೂ ಆಹ್ವಾನ ನೀಡಿ, ನನಗೆ ಆಶೀರ್ವಾದ ಮಾಡಬೇಕು ಎಂದು ಮನವಿ ಮಾಡಿದ್ದೇನೆ ಎಂದು ತಿಳಿಸಿದರು.

ಕೋಲಾರದಲ್ಲಿ ಮುನಿಯಪ್ಪ ಅವರ ಕುಟುಂಬಕ್ಕೆ ಟಿಕೆಟ್ ನೀಡಬಾರದು ಎಂಬ ಆಗ್ರಹದೊಂದಿಗೆ ಶಾಸಕರು ಹಾಗೂ ವಿಧಾನ ಪರಿಷತ್ ಸದಸ್ಯರ ರಾಜೀನಾಮೆ ಬೆದರಿಕೆ ಬಗ್ಗೆ ಕೇಳಿದಾಗ, ಈ ವಿಚಾರವಾಗಿ ನನಗೆ ಮಾಹಿತಿ ಇಲ್ಲ ಎಂದು ತಿಳಿಸಿದರು.

ಯೋಗೇಶ್ವರ್ ಅವರ ಪುತ್ರಿ ನಿಶಾ ಯೋಗೇಶ್ವರ್ ಅವರು ಪಕ್ಷ ಸೇರ್ಪಡೆಯಾಗುವ ಬಗ್ಗೆ ಚರ್ಚೆ ನಡೆಯುತ್ತಿದ್ದು, ಪಕ್ಷದ ವರಿಷ್ಠರು ಈ ಬಗ್ಗೆ ತೀರ್ಮಾನ ಮಾಡಲಿದ್ದಾರೆ. ಅವರು ಬಹಳ ದಿನಗಳಿಂದ ಪಕ್ಷ ಸೇರುವುದಾಗಿ ಹೇಳುತ್ತಿದ್ದಾರೆ. ಅವರ ಸ್ವಯಂ ತೀರ್ಮಾನದ ಬಗ್ಗೆ ಜಿಲ್ಲೆಯ ಮುಖಂಡರು ಹಾಗೂ ನಾಯಕರ ಜತೆ ಚರ್ಚೆ ಮಾಡಿ ಅವರ ಅಭಿಪ್ರಾಯದ ಮೇರೆಗೆ ತೀರ್ಮಾನಿಸಲಾಗುವುದು.

ಡಿ.ಕೆ.ಸುರೇಶ್, ಸಂಸದ

ಬಿಜೆಪಿ ಮುಖಂಡ ಬಿ.ವಿ.ನಾಯಕ ಎಚ್ಚರಿಕೆ | ಆತ್ಮಹತ್ಯೆಗೆ ಮುಂದಾದ ಅಭಿಮಾನಿಗಳು

ಟಿಕೆಟ್ ಕೊಡದಿದ್ದರೆ ನನ್ನ ದಾರಿ ನೋಡಿಕೊಳ್ಳುವೆ

ರಾಯಚೂರು: ಎರಡು ದಿನದಲ್ಲಿ ಬಿಜೆಪಿ ವರಿಷ್ಠರು ರಾಯಚೂರು ಲೋಕಸಭೆ ಕ್ಷೇತ್ರದ ಟಿಕೆಟ್ ವಿಚಾರದಲ್ಲಿ ಮರುಪರಿಶೀಲನೆ ನಡೆಸಿ ನಿರ್ಧಾರ ಪ್ರಕಟಿಸಬೇಕು. ಇಲ್ಲವಾದರೆ ನಾನು ನನ್ನ ದಾರಿ ನೋಡಿಕೊಳ್ಳಬೇಕಾಗುತ್ತದೆ ಎಂದು ಟಿಕೆಟ್ ಆಕಾಂಕ್ಷಿ ಬಿ.ವಿ.ನಾಯಕ ಎಚ್ಚರಿಕೆ ನೀಡಿದರು. ನಗರದ ಖಾಸಗಿ ಹೋಟೆಲ್‌ನಲ್ಲಿ ನಡೆದ ಬಿ.ವಿ.ನಾಯಕ ಅಭಿಮಾನಿಗಳ ಹಿತೈಷಿಗಳ ಕಾರ್ಯಕರ್ತರ ಚಿಂತನಾ ಸಭೆಯಲ್ಲಿ ಮಾತನಾಡಿ, ನಮ್ಮ ಮನೆತನದ ರಾಜಕೀಯ ಇತಿಹಾಸ ಒತ್ತೆ ಇಟ್ಟು ಬಿಜೆಪಿಗೆ ಬಂದಿದ್ದೇನೆ. ಟಿಕೆಟ್ ನೀಡುವುದಾಗಿ ಭರವಸೆ ನೀಡಿ ಕೊನೆಗೆ ಕೈ ಕೊಡಲಾಗಿದೆ. ಇದು ನನ್ನ ಬೆಂಬಲಿಗರಿಗೆ ಸಾಕಷ್ಟು ಬೇಸರ ಉಂಟು ಮಾಡಿದೆ. ಎರಡು ದಿನದಲ್ಲಿ ಟಿಕೆಟ್ ವಿಚಾರದಲ್ಲಿ ಮರು ಪರಿಶೀಲನೆಗೆ ಮುಂದಾಗಬೇಕು. ಇಲ್ಲವಾದರೆ ಕಾರ್ಯಕರ್ತರು ಕೈಗೊಳ್ಳುವ ನಿರ್ಧಾರಕ್ಕೆ ಬದ್ಧ ಎಂದರು. ಕ್ಷೇತ್ರದಲ್ಲಿ ಎಲ್ಲಿಯೇ ಕೇಳಿದರೂ ನನ್ನ ಹೆಸರು ಮುಂಚೂಣಿಯಲ್ಲಿದೆ.ಆದರೆ, ಒಮ್ಮೆಯೂ ಕಾರ್ಯಕರ್ತರ ಭೇಟಿಯಾಗದ ಸಮಸ್ಯೆಗಳಿಗೆ ಕಿವಿಯಾಗದ ರಾಜಾ ಅಮರೇಶ್ವರ ನಾಯಕರಿಗೆ ಟಿಕೆಟ್ ಕೊಡಲಾಗಿದೆ. ಕಾರ್ಯಕರ್ತರು ಕೊನೆ ತನಕ ಜತೆಗೆ ನಿಲ್ಲುವುದಾದರೆ ನಾನು ಯಾವ ನಿರ್ಧಾರ ಕೈಗೊಳ್ಳಲು ಸಿದ್ಧ ಎಂದರು.

ಬಿ.ವಿ.ನಾಯಕ್‌ಗೆ ಬಿಜೆಪಿ ಟಿಕೆಟ್ ತಪ್ಪಿದ ಹಿನ್ನೆಲೆಯಲ್ಲಿ ಬೆಂಬಲಿಗರು ಆತ್ಮಹತ್ಯೆಗೆ ಯತ್ನಿಸಿದರು.

ಆತ್ಮಹತ್ಯೆಗೆ ಯತ್ನ

ಬಿ.ವಿ.ನಾಯಕ್ ಗೆ ಬಿಜೆಪಿ ಟಿಕೆಟ್ ತಪ್ಪಿದ ಹಿನ್ನೆಲೆಯಲ್ಲಿ ಬೆಂಬಲಿಗರ ಆಕ್ರೋಶ ಭುಗಿಲೆದ್ದಿದ್ದು, ಇಂದು ನಡೆದ ಚಿಂತನಾ ಸಭೆ ಬಳಿಕ ಬೆಂಬಲಿಗರು ಡೀಸೆಲ್ ಮೈ ಮೇಲೆ ಸುರಿದುಕೊಂಡು ಆತ್ಮಹತ್ಯೆಗೆ ಯತ್ನಿಸಿದ ಘಟನೆ ನಡೆದಿದೆ. ಬೆಂಬಲಿಗರಾದ ಶಿವಮೂರ್ತಿ, ರಾಘವೇಂದ್ರ ಎನ್ನುವವರು ಆತ್ಮಹತ್ಯೆಗೆ ಮುಂದಾಗಿದ್ದಾರೆ. ಸಭೆಯಲ್ಲಿಯೂ ಭಾರೀ ಆಕ್ರೋಶ ವ್ಯಕ್ತವಾಯಿತು. ಬಳಿಕ ಕೆಳಗಿಯುವಾಗ ರಾಯಚೂರು ಹಬ್ ಮುಂಭಾಗದಲ್ಲಿ ಟೈರ್‌ಗೆ ಬೆಂಕಿ ಹಚ್ಚಿ ಆಕ್ರೋಶ ಹೊರಹಾಕಿದ್ದಾರೆ. ಈ ವೇಳೆ ತೀರ ಹತಾಶೆಗೊಂಡಿದ್ದ ಕಾರ್ಯಕರ್ತರು ಡೀಸೆಲ್ ಸುರಿದುಕೊಂಡು ಆಕ್ರೋಶ ವ್ಯಕ್ತಪಡಿಸಿದ್ದಾರೆ.

28 ಕ್ಷೇತ್ರಗಳಲ್ಲಿ ಗೆಲುವು

ಯಲ್ಲಾಪುರ: ಬಿಜೆಪಿ ಬಗೆಗಿನ ವಿಶ್ವಾಸ, ಪ್ರಧಾನಿ ನರೇಂದ್ರ ಮೋದಿಯವರ ಅಭಿವೃದ್ಧಿ ಚಟುವಟಿಕೆಯ ಕುರಿತ ನಂಬಿಕೆ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ. ರಾಜ್ಯದ 28 ಲೋಕಸಭಾ ಕ್ಷೇತ್ರಗಳಲ್ಲಿಯೂ ಬಿಜೆಪಿ ಗೆಲ್ಲಲಿದೆ ಎಂದು ಉತ್ತರ ಕನ್ನಡ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ವಿಶ್ವೇಶ್ವರ ಹೆಗಡೆ ಕಾಗೇರಿ ವಿಶ್ವಾಸ ವ್ಯಕ್ತಪಡಿಸಿದರು.

ಪಟ್ಟಣದ ಬಿಜೆಪಿ ಕಾರ್ಯಾಲಯದಲ್ಲಿ ಬುಧವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿ,, ಬಿಜೆಪಿ ನನ್ನನ್ನು ಉತ್ತರ ಕನ್ನಡ ಲೋಕಸಭಾ ಕ್ಷೇತ್ರದ ಅಭ್ಯರ್ಥಿ ಎಂದು ಘೋಷಿಸಿದ ದಿನದಿಂದಲೂ ವಿವಿಧ ರೀತಿಯ ಸಂಪರ್ಕ ಚಟುವಟಿಕೆ ನಡೆಸಿದ್ದೇನೆ. ಎಲ್ಲೆಡೆ ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗಿದೆ. ಈ ಸಲದ ಬಿಜೆಪಿಯ ಗೆಲುವಿಗೆ ಜೆಡಿಎಸ್ ಜೊತೆಗಿನ ಮೈತ್ರಿಯೂ ಅನುಕೂಲ ಒದಗಿಸಲಿದೆ ಎಂದು ತಿಳಿಸಿದರು. ಮಾಜಿ ಸಚಿವ ಹರತಾಳು ಹಾಲಪ್ಪ, ಮಾಜಿ ಶಾಸಕಿ ರೂಪಾಲಿ ನಾಯ್ಕ, ಲೋಕಸಭಾ ಕ್ಷೇತ್ರದ ಪ್ರಭಾರ ಭಾರತಿ ಜಂಬಗಿ, ಮಾಧ್ಯಮ ವಕ್ತಾರ ಹರಿಪ್ರಕಾಶ ಕೋಣೆಮನೆ, ವಿಧಾನ ಪರಿಷತ್ ಸದಸ್ಯ ಶಾಂತಾರಾಮ ಸಿದ್ದಿ, ಜಿಲ್ಲಾ ಘಟಕ ಅಧ್ಯಕ್ಷ ಎನ್.ಎಸ್. ಹೆಗಡೆ ಇದ್ದರು.

ಚಾಯ್ ವಾಲಾ, ಚೌಕಿದಾರ್ ಚೋರ್, ಮೋದಿಗೆ ಪರಿವಾರ ಇಲ್ಲ ಅಂದರು. ನಾವು ಕೂಡ ಅದನ್ನು ಅಸ್ತ್ರ ಮಾಡಿಕೊಂಡಿದ್ದೇವೆ. ಶಿವರಾಜ್ ತಂಗಡಗಿ ಈ ಹಿಂದೆ ಬಿಜೆಪಿಯಲ್ಲಿದ್ದಾಗ ಸೋನಿಯಾ ಗಾಂಧಿ ಅವರಿಗೆ ಬೈಯ್ಯುತ್ತಿದ್ದರು. ಈಗ ಮೋದಿ ಅವರಿಗೆ ಅನ್ನುತ್ತಿದ್ದಾರೆ. ಕರ್ನಾಟಕ ಜನತೆಗೆ ಸಂಸ್ಕೃತ ಹೇಳಬೇಕಾದವರೂ, ಈ ರೀತಿ ಮಾತನಾಡುತ್ತಿದ್ದಾರೆ. ಇಡೀ ಸರಕಾರವೇ ಸಂಸ್ಕಾರ ಇಲ್ಲದ, ಹೊಲಸು ಪದ ಉಪಯೋಗ ಮಾಡುತ್ತಿದೆ.

-ಆರ್.ಅಶೋಕ, ಪ್ರತಿಪಕ್ಷ ನಾಯಕ

ಬಿಜೆಪಿ,ಜೆಡಿಎಸ್ ಮುಖಂಡರು ಒಂದು ತಿಂಗಳಿಂದ ಅಳೆದು ತೂಗಿ ಅಂತಿಮವಾಗಿ ಹೆಸರು ಘೋಷಣೆ ಮಾಡಿದ್ದಾರೆ. ಮೈತ್ರಿ ಅಭ್ಯರ್ಥಿ ಘೋಷಣೆಗೆ ಇಷ್ಟು ದಿನ ಬೇಕಿತ್ತಾ. ಇಷ್ಟು ದಿನ ಸಿ. ಎಸ್.ಪುಟ್ಟರಾಜು ಅವರೇ ಅಭ್ಯರ್ಥಿ ಎಂದು ಹೇಳಲಾಗುತ್ತಿತ್ತು. ಆದರೆ ಈಗ ಅಭ್ಯರ್ಥಿ ಬದಲಾವಣೆ ಮಾಡಲಾಗಿದೆ. ಯಾರೇ ಅಭ್ಯರ್ಥಿಯಾದರೂ ನಮ್ಮ ನಿಲುವು ಸ್ಪಷ್ಟವಾಗಿದ್ದು ನಮ್ಮ ಪರ ಜಿಲ್ಲೆಯಾದ್ಯಂತ ಅಪಾರ ಬೆಂಬಲ ವ್ಯಕ್ತವಾಗುತ್ತಿದೆ.

-ಎನ್.ಚಲುವರಾಯಸ್ವಾಮಿ, ಸಚಿವ

ಸ್ಟಾರ್ ಚಂದ್ರು ಅವರು ಈಗಾಗಲೇ ಕ್ಷೇತ್ರದಾದ್ಯಂತ ಪ್ರವಾಸ ಮಾಡಿದ್ದು ಉತ್ತಮ ಪ್ರತಿಕ್ರಿಯೆ ವ್ಯಕ್ತವಾಗುತ್ತಿದೆ. ಜನರು ಅವರ ಪರವಾಗಿ ಪ್ರೀತಿ ತೋರಿಸುತ್ತಿದ್ದು ಮಂಡ್ಯ ಜಿಲ್ಲೆಯಲ್ಲಿ ಕಾಂಗ್ರೆಸ್ ಪಕ್ಷ ಜಯಭೇರಿ ಬಾರಿಸಲಿದೆ. ಕಾಂಗ್ರೆಸ್ ಸರಕಾರ ಜಾರಿಗೊಳಿಸಿರುವ ಗ್ಯಾರಂಟಿ ಯೋಜನೆಗಳಿಂದ ಉತ್ತಮ ಫಲಿತಾಂಶ ಬರಲಿದೆ. ಮಂಡ್ಯ ನಗರದ ಅಭಿವೃದ್ಧಿಗಾಗಿ ಈ ಬಾರಿ ಕಾಂಗ್ರೆಸ್ ಪಕ್ಷದ ಅಭ್ಯರ್ಥಿಗೆ ಆಶೀರ್ವಾದ ಮಾಡುತ್ತಾರೆ ಎಂಬ ವಿಶ್ವಾಸವಿದೆ.

-ಗಣಿಗ ರವಿಕುಮಾರ್, ಶಾಸಕ

ಇವತ್ತಿನ ರಾಜಕೀಯ ಪರಿಸ್ಥಿತಿಯಲ್ಲಿ ರಾಜೀವ್ ಅವರ ತೀರ್ಮಾನ ಅಭಿನಂದನೀಯ. ಕಾಂಗ್ರೆಸ್ ರಾಷ್ಟ್ರೀಯ ಪಕ್ಷ. ಎಲ್ಲರನ್ನೂ ಸಮಾನತೆಯಿಂದ ನೋಡುತ್ತದೆ. ನಮ್ಮ ಸಿದ್ಧಾಂತ ಹಾಗೂ ಬಿಜೆಪಿ ಸಿದ್ಧಾಂತಕ್ಕೆ ಅಜಗಜಾಂತರ ವ್ಯತ್ಯಾಸ ಇದೆ. ನಮ್ಮದು ಸಮಾನತೆಯ ಸಿದ್ಧಾಂತ. ಧರ್ಮ, ಜಾತಿ ಆಧಾರಿತ ಪಕ್ಷ ನಮ್ಮದಲ್ಲ. ಸಾಮಾಜಿಕ ನ್ಯಾಯ ನಮ್ಮ ಗುರಿ. ಹಿಂದುಳಿದವರನ್ನು ಮುಂದೆ ತರುವುದು ನಮ್ಮ ಉದ್ದೇಶ. ನಮ್ಮ ಪಕ್ಷದ ಜತೆ ಕೈಜೋಡಿಸಿ, ಎಲ್ಲರಿಗೂ ಅನುಕೂಲ ಆಗಲಿದೆ.

-ದಿನೇಶ್ ಗುಂಡೂರಾವ್, ಸಚಿವ